ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:02:ಯೋಜನೆ:ಅಬಿ:2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:16.10.2023

## ಸುತ್ತೋಲೆ

ವಿಷಯ: ಸರ್ಕಾರದ ಆದೇಶವನ್ನು ಇಲಾಖಾ ವ್ಯಾಪ್ತಿಯ ಡಿ.ಡಿ.ಓ ಗಳಿಗೆ (ಜಿಲ್ಲಾ ಹಂತದ ಅಧಿಕಾರಿಗಳು) ಪರಿಚಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ/12/ಟಿಎಫ್‌ಪಿ/2023, ದಿನಾಂಕ: 22.09.2023.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಜಿಲ್ಲಾ ಹಂತದ ಅಧಿಕಾರಿಗಳು) ಗ್ರಂಥಾಲಯ ಪುಸ್ತಕಗಳು ಹಾಗೂ ನಿಯತಕಾಲಿಕಗಳ ಖರೀದಿಗಾಗಿ ಆರ್ಥಿಕ ಅಧಿಕಾರವನ್ನು ಪರಿಷ್ಕರಿಸಿ ಉಲ್ಲೇಖಿತ ಆದೇಶದಲ್ಲಿ ಪ್ರತ್ಯಾಯೋಜಿಸಲಾಗಿದೆ. ಸದರಿ ಆದೇಶವನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಇಲಾಖಾ ವ್ಯಾಪ್ತಿಯ ಡಿ.ಡಿ.ಓ ಗಳಿಗೆ ಪರಿಚಲಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಡಿ.ಡಿ.ಓ ಗಳಿಗೆ (ಜಿಲ್ಲಾ ಹಂತದ ಅಧಿಕಾರಿಗಳು)-ಸೂಕ್ತ ಕ್ರಮಕ್ಕಾಗಿ.
2. ಮ್ಯಾನೇಜರ್/ಅಧೀಕ್ಷಕರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು.-ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಜಿಲ್ಲಾ ಹಂತದ ಅಧಿಕಾರಿಗಳು) ಪುಸ್ತಕ ಹಾಗೂ ನಿಯತಕಾಲಿಕೆಗಳನ್ನು ಖರೀದಿಸಲು ವಿಶೇಷ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂ:ಆಇ 3 ಟಿಎಫ್‌ಪಿ 2018, ದಿ:14.05.2018.
2. ಇ-ಆಫೀಸ್ ಕಡತ ಸಂ:ಆಇ/501/ವೆಚ್ಚ-8/2023.
3. ಇ-ಆಫೀಸ್ ಕಡತ ಸಂ:ಇಡಿ/106/ಹೆಚ್‌ಪಿಸಿ/2023.

ಪ್ರಸ್ತಾವನೆ:-

ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಎಲ್ಲಾ ಇಲಾಖಾ ಮುಖ್ಯಸ್ಥರು ಮತ್ತು ವಿವಿಧ ಮಟ್ಟದ ಅಧಿಕಾರಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿದೆ. ಕ್ರಮ ಸಂ: 3 ರಲ್ಲಿ ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಪುಸ್ತಕ ಮತ್ತು ನಿಯತಕಾಲಿಕೆಗಳನ್ನು ಖರೀದಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ವಾರ್ಷಿಕ ರೂ.20,000.00 ಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಿದೆ.

ಮೇಲೆ (2) ಮತ್ತು (3)ರಲ್ಲಿ ಓದಲಾದ ಕಡತಗಳಲ್ಲಿ ಪ್ರಸ್ತುತ ಮಾರುಕಟ್ಟೆಯಲ್ಲಿ ಪುಸ್ತಕಗಳ ಬೆಲೆ ನಿರಂತರವಾಗಿ ಹೆಚ್ಚಳವಾಗುತ್ತಿದೆ. ವಿದ್ಯಾರ್ಥಿಗಳಿಗೆ ಸಕಾಲಿಕವಾದ ಮತ್ತು ಪ್ರಸ್ತುತವಾದ ಜ್ಞಾನಾರ್ಜನೆಗೆ ಪುಸ್ತಕಗಳು ಹಾಗೂ ನಿಯತಕಾಲಿಕಗಳು ಅತ್ಯಂತ ಮುಖ್ಯವಾಗಿರುವುದಾಗಿ ತಿಳಿಸುತ್ತಾ, ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಜಿಲ್ಲಾ ಮಟ್ಟದ ಅಧಿಕಾರಿಗಳಾಗಿದ್ದು, ಇವರಿಗೆ ಸೀಮಿತವಾಗಿ ಪುಸ್ತಕ ಖರೀದಿಗೆ ಪ್ರಸ್ತುತ ಇರುವ ಆರ್ಥಿಕ ಮಿತಿಯನ್ನು ರೂ.20,000/- ರಿಂದ ಒಂದು ಬಾರಿಗೆ ರೂ.50,000/- ರಂತೆ ವಾರ್ಷಿಕ ರೂ.5,00,000/-ಗಳಿಗೆ ಹೆಚ್ಚಿಸಲು ಕೋರಿರುತ್ತಾರೆ.

ಪ್ರಸ್ತಾವನೆ ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂ: ಎಫ್‌ಡಿ 12 ಟಿಎಫ್‌ಪಿ 2023,

ದಿನಾಂಕ: 22-09-2023.

ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಕೆಳಗಿನಂತೆ ಆಯವ್ಯಯ ಅನುದಾನದ ಲಭ್ಯತೆಗೆ ಒಳಪಟ್ಟು ಹಾಗೂ ಕೆ.ಟಿ.ಪಿ.ಪಿ. ನಿಯಮಗಳನ್ನು ಅನುಸರಿಸುವ ಷರತ್ತಿಗೊಳಪಟ್ಟು ವಿಶೇಷ ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಲು ಮಂಜೂರಾತಿ ನೀಡಲಾಗಿದೆ.

| ಅಧಿಕಾರದ ವಿವರಗಳು | ಅಧಿಕಾರಿಗಳು | ವಿಶೇಷ ಆರ್ಥಿಕ ಅಧಿಕಾರ |
|---|---|---|
| | ಪ್ರಥಮ ದರ್ಜೆ ಕಾಲೇಜುಗಳ | ಪ್ರತಿ ಬಾರಿಗೆ ರೂ.50000/- |

| | | |
|---|---|---|
| ಪುಸ್ತಕ ಮತ್ತು ನಿಯತಕಾಲಿಕೆಗಳು | ಪ್ರಾಂಶುಪಾಲರು (ಜಿಲ್ಲಾ ಮಟ್ಟದ ಅಧಿಕಾರಿ) | ಗಳವರೆಗೆ ವಾರ್ಷಿಕ ರೂ.2.00 ಲಕ್ಷಗಳ ಮಿತಿಗೊಳಪಟ್ಟು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Signed by
Shobha H A
Date: 22-09-2023 17:41:16

ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಆನಿ ಮತ್ತು ಬಿಸಿಸಿ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, ಲೆಕ್ಕಪತ್ರಗಳು ಮತ್ತು ಹಕ್ಕುಗಳು ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿಎಸ್ಎಸ್ಎ), ರೆಸಿಡೆನ್ಸಿ ರಸ್ತೆ, ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ.ಆರ್.ಎಸ್.ಎ), ರೆಸಿಡೆನ್ಸಿ ರಸ್ತೆ, ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಇವರ ಮುಖಾಂತರ ಎಲ್ಲಾ ಪ್ರಥಮ ದರ್ಜೆ ಕಾಲೇಜುಗಳಿಗೆ ಪ್ರತಿಗಳನ್ನು ಕಳುಹಿಸುವುದು.
6. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್, ಔಷಧ ನಿಯಂತ್ರಣ ಕಛೇರಿ ಕಟ್ಟಡದ ಆವರಣ, ಅರಮನೆ ರಸ್ತೆ, ಬೆಂಗಳೂರು-560 001-ಎಲ್ಲಾ ಜಿಲ್ಲಾ ಖಜಾನೆ/ಉಪ ಖಜಾನೆಗಳಿಗೆ ಪ್ರತಿಗಳನ್ನು ಕಳುಹಿಸುವುದು.
7. ಬಿಡಿ ಪ್ರತಿ / ಶಾ.ರ.ಕ.
8. ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ನಲ್ಲಿ ವೀಕ್ಷಿಸಿ.